**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**ಅಸಲು ದಾವೆ ಸಂಖ್ಯೆ 315/2024**

**ಪಿ.ಡಬ್ಲ್ಯು: 1**

**ದಿನಾಂಕಃ 12.11.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿಪರ: ಶ್ರೀ. ಕೆ.ಆರ್. ವಕೀಲರಿಂದಃ–**

ನಾನು ಈ ದಾವೆಯಲ್ಲಿ ವಾದಿ ಪರ ವಿಶೇಷ ಮುಕ್ತ್ಯಾರ್ ನಾಮೆಯ ಮೂಲಕ ಅಧಿಕಾರ ಪಡೆದು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಸಾಕ್ಷಿಯು ಕೆಳಕಂಡ ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

ವಿಶೇಷ ಮುಕ್ತ್ಯಾರ್ ನಾಮೆಯ ಪತ್ರನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು ಗುರುತಿಸಲಾಯಿತು.

ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.2 ಎಂದು ಗುರುತಿಸಲಾಯಿತು.

ದಿನಾಂಕ 26.11.1997 ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು ಗುರುತಿಸಲಾಯಿತು.

ದಿನಾಂಕ 30.08.2021 ರಂದು ತಹಶಿಲ್ದಾರರವರಿಗೆ ನೀಡಿದ ಅರ್ಜಿಯ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು ಗುರುತಿಸಲಾಯಿತು.

ಕಡೂರು ತಹಶಿಲ್ದಾರರವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.5 ಎಂದು ಗುರುತಿಸಲಾಯಿತು.

ತರೀಕೆರೆ ಉಪ-ವಿಭಾಗಾಕಾರಿಯವರ ನ್ಯಾಯಾಲಯದ ಆರ್.ಎ.ನಂ93/2024ರ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.6 ಎಂದು ಗುರುತಿಸಲಾಯಿತು.

**(ಪ್ರತಿವಾದಿಯರ ಪರ ಲಿಖಿತ ಹೇಳಿಕೆಯನ್ನು ಸಲ್ಲಿಸದೆ ಇರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು)**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ್ದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

sd/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ‌ಃದಃನ್ಯಾಃದಂ.,ರವರು ಕಡೂರು.